**ಕರ್ನಾಟಕ ಲೋಕಾಯುಕ್ತ**

ಸಂಖ್ಯೆ: ಕಂಪ್ಲೆಂಟ್\ಉಪಲೋಕ್\ಎಂವೈಎಸ್\9032\2017\ಸನಿಕಾಸ-1 ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 31/10/2017

**ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(3)ರ ಅನ್ವಯ ವರದಿ**

**ವಿಷಯ:** ಸರ್ಕಾರಿ ನೌಕರರಾದ ಮೈಸೂರು ಜಿಲ್ಲೆ ಮತ್ತು ತಾಲ್ಲೂಕ್ ಉದ್ಬೂರು ಗ್ರಾಮ ಪಂಚಾಯತ್ ಸದಸ್ಯರಾಗಿದ್ದ ಶ್ರೀ.ಜಿ.ಪೀತಾಂಬರ ರವರು ಕರ್ತವ್ಯ ಲೋಪ/ ದುರ್ವರ್ತನೆ ಎಸಗಿರುವ ಬಗ್ಗೆ.

*********

ಮೈಸೂರು ಜಿಲ್ಲೆ ಮತ್ತು ತಾಲ್ಲೂಕ್ ಜಯಪುರ ಹೋಬಳಿ ಉದ್ಬೂರು 6ನೇ ಬ್ಲಾಕ್ ನಂ.1474 ನಿವಾಸಿಯಾದ ಶ್ರೀ.ಡಿ.ಮಹದೇವಯ್ಯ ಬಿನ್ ದೇವಯ್ಯ (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ ಮೈಸೂರು ಜಿಲ್ಲೆ ಮತ್ತು ತಾಲ್ಲೂಕ್ ಉದ್ಬೂರು ಗ್ರಾಮ ಪಂಚಾಯತ್ ಸದಸ್ಯರಾಗಿದ್ದ ಶ್ರೀ.ಜಿ.ಪೀತಾಂಬರ (ಇನ್ನು ಮುಂದೆ "ಎದುರುದಾರರು" ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ಕರ್ತವ್ಯ ಲೋಪದ ಬಗ್ಗೆ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಂಡಿದ್ದಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-** ಮೈಸೂರು ಜಿಲ್ಲೆ ಮತ್ತು ತಾಲ್ಲೂಕ್ ಉದ್ಬೂರು ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸಂಬಂಧಪಟ್ಟಂತೆ, ಎದುರುದಾರರು 2009ರಲ್ಲಿ ಗ್ರಾಮ ಪಂಚಾಯತ್ ಸದಸ್ಯರಾಗಿದ್ದಾಗ ಟ್ರ್ಯಾಕ್ಟರ್ ಮತ್ತು ಜೆಸಿಬಿ ಯಂತ್ರದ ಮಾಲೀಕರಲ್ಲದಿದ್ದರೂ ಸಹ ಕಾಮಗಾರಿ ನಿರ್ವಹಿಸದೇ ಅಕ್ರಮವಾಗಿ ಸದರಿ ಗ್ರಾಮ ಪಂಚಾಯತ್‌ನಿಂದ ದಿ:21/11/09ರಂದು ಚೆಕ್ ನಂ.970537 ಮೂಲಕ ಗ್ರಾಮ ಪಂಚಾಯತ್ ಎಸ್‌ಬಿ ಖಾತೆ ಸಂ:2696 ರಿಂದ ತಮ್ಮ ವೈಯಕ್ತಿಕ ಎಸ್‌ಬಿ ಖಾತೆ ಸಂ:4255ಕ್ಕೆ ನೇರವಾಗಿ ₹36,768/-ನ್ನು ಪಡೆದಿರುವುದಾಗಿ ಹೇಳಿದ್ದಾರೆ.

3. ದೂರಿನ ಬಗ್ಗೆ ಎದುರುದಾರರಿಂದ ಆಕ್ಷೇಪಣೆಯನ್ನು ಕೇಳಲಾಗಿ, ಎದುರುದಾರರಿಗೆ ನೋಟೀಸ್ ತಲುಪಿದ್ದು, ಸಾಕಷ್ಟು ಕಾಲಾವಕಾಶವನ್ನು ನೀಡಿದ್ದರೂ ಸಹ ಯಾವುದೇ ಆಕ್ಷೇಪಣೆಯನ್ನು ಸಲ್ಲಿಸಿಲ್ಲ.

4. ಕಡತ ಮತ್ತು ದಾಖಲೆಗಳನ್ನು ಕೂಲಂಕಷವಾಗಿ ಪರಿಶೀಲಿಸಲಾಗಿ, ಕಂಡು ಬರುವ ಅಂಶಗಳೇನೆಂದರೆ:

ಮೈಸೂರು ಜಿಲ್ಲಾಧಿಕಾರಿಗಳ ಕಾರ್ಯಾಲಯದ ಅಧಿಸೂಚನೆ ಸಂ:ಇಎನ್‌ಎನ್ ಗ್ರಾಪಂ 68/2004-05 ದಿ:05/03/05ರ ಅಧಿಸೂಚನೆಯನ್ವಯ ಎದುರುದಾರರು ಉದ್ಬೂರು ಗ್ರಾಮ ಪಂಚಾಯತ್‌ಗೆ ಸಂಬಂಧಪಟ್ಟ ಅನುಸೂಚಿತ ಪಂಗಡದ ಅಭ್ಯರ್ಥಿಯಾಗಿ ಆಯ್ಕೆಯಾಗಿದ್ದು, ಸದರಿ ಗ್ರಾಮ ಪಂಚಾಯತ್‌ನ ಸದಸ್ಯರಾಗಿದ್ದಾರೆ. ಸದರಿ ಗ್ರಾಮ ಪಂಚಾಯತ್‌ನ ವ್ಯಾಪ್ತಿಗೆ ಸಂಬಂಧಪಟ್ಟಂತೆ ಉದ್ಬೂರು ಗ್ರಾಮದ ಚಿಕ್ಕಕೆರೆ ಹೂಳೆತ್ತುವಿಕೆ ಕಾಮಗಾರಿಯಲ್ಲಿ ಕೆರೆಯಿಂದ ಸರ್ಕಾರಿ ಪ್ರೌಢ ಶಾಲಾ ಮೈದಾನಕ್ಕೆ ಟ್ರ್ಯಾಕ್ಟರ್ ಮೂಲಕ ಮಣ್ಣು ಸಾಗಣೆ ಮಾಡಿದ ಬಾಬ್ತು, 3 ಟ್ರ್ಯಾಕ್ಟರ್ ಬಾಡಿಗೆ ಹಾಗೂ ಮಣ್ಣನ್ನು ಸಮತಟ್ಟು ಮಾಡಲು 2 ದಿವಸ ಜೆಸಿಬಿ ಯಲ್ಲಿ ಸಮತಟ್ಟು ಮಾಡಿರುವ ಬಾಬ್ತು ಎದುರುದಾರರಿಗೆ ₹36,768/-ನ್ನು ಪಂಚಾಯತ್ ವತಿಯಿಂದ ಬಿಲ್ ನಂ.20/2009-10ರಂತೆ ನೀಡಿರುವುದು ಕಂಡು ಬಂದಿದೆ. ಅದೇ ರೀತಿ, ಸದರಿ ಬಿಲ್ ಮೊತ್ತವನ್ನು ಕಾವೇರಿ ಕಲ್ಪತರು ಗ್ರಾಮೀಣ ಬ್ಯಾಂಕ್, ಉದ್ಬೂರು ಶಾಖೆ ಪಂಚಾಯತ್ ಖಾತಾ ನಂ.970537 ರ ಮೂಲಕ ಚೆಕ್ ಅನ್ನು ದೂರುದಾರರ ಖಾತಾ ಸಂ:ಎಸ್‌ಬಿ 4255ಕ್ಕೆ ₹36,768/-ನ್ನು ಜಮಾ ಮಾಡಿರುವುದು ಕಂಡು ಬಂದಿದೆ. ಆದರೆ, ಎದುರುದಾರರು 2 ಜೆಸಿಬಿ ಮತ್ತು 3 ಟ್ರ್ಯಾಕ್ಟರ್‌ಗಳನ್ನು ಹೊಂದಿರುವ ಬಗ್ಗೆ ಯಾವುದೇ ದಾಖಲೆಗಳಿಲ್ಲ ಹಾಗೂ ಸದರಿ ಕಾಮಗಾರಿ ನಿರ್ವಹಣೆಯಾಗಿರುವ ಬಗ್ಗೆಯೂ ಸಹ ಯಾವುದೇ ದಾಖಲೆಗಳಿಲ್ಲ. ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಅನ್ವಯ ಯಾವುದೇ ಪಂಚಾಯತ್ ಸದಸ್ಯ ಸದರಿ ಗ್ರಾಮ ಪಂಚಾಯತ್ ವ್ಯಾಪ್ತಿಗೆ ಸಂಬಂಧಪಟ್ಟಂತೆ, ಯಾವುದೇ ಕಾಮಗಾರಿಯನ್ನು ತಾನೇ ಸ್ವತಃ ನಿರ್ವಹಣೆ ಮಾಡತಕ್ಕದಲ್ಲ ಎಂಬುದಾಗಿ ಕಾನೂನು ಪರಿಭಾಷಿಸಿದೆ. ಆದರೆ, ಎದುರುದಾರರು ತಮ್ಮ ಅಧಿಕಾರದ ಪ್ರಭಾವವನ್ನು ಬೀರಿ, ಸದರಿ ಕಾನೂನನ್ನು ಉಲ್ಲಂಘಿಸಿ, ಕಾಮಗಾರಿ ನಿರ್ವಹಣೆ ಮಾಡದೇ ಹಣ ದುರುಪಯೋಗ ಪಡಿಸಿಕೊಂಡಿರುವುದು ಮೇಲ್ನೋಟಕ್ಕೆ ಕಂಡು ಬಂದಿದೆ.

5. ಮೇಲ್ಕಂಡ ಅಂಶಗಳು, ಕಡತದ ಸಂಗತಿಗಳು ಹಾಗೂ ದಾಖಲಾತಿಗಳನ್ನು ಕೂಲಂಕಷವಾಗಿ ಪರಿಶೀಲಿಸಿದಾಗ, ಸದರಿ ಎದುರುದಾರರು ವಿರುದ್ಧದ ನಡವಳಿಯನ್ನು ಕೈಬಿಡಲು ಸೂಕ್ತ/ ಸಮಂಜಸ/ ಸಮಾಧಾನಕರ ಕಾರಣವಿಲ್ಲವೆಂಬ ಅಭಿಪ್ರಾಯಕ್ಕೆ ಬರಲಾಗಿದೆ.

MYS/9032/17

6. ಕಡತದಲ್ಲಿಯ ಸಂಗತಿಗಳು ಹಾಗೂ ದಾಖಲಾತಿಗಳಿಂದ, ಎದುರುದಾರರು ಸರ್ಕಾರಿ/ ಸಾರ್ವಜನಿಕ ನೌಕರರಾಗಿ ಪರಿಪೂರ್ಣ ಪ್ರಾಮಾಣಿಕತೆ, ಸಂಪೂರ್ಣ ಕರ್ತವ್ಯ ನಿಷ್ಠತೆ ಮತ್ತು ಸರ್ಕಾರಿ ಸೇವಕರಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡ ದುರ್ವರ್ತನೆ/ ದುರ್ನಡತೆ ಮೇಲ್ನೋಟಕ್ಕೆ ಕಂಡು ಬರುತ್ತದೆ.

7. ಅದಲ್ಲದೆ, ಎದುರದಾರರು ಸರ್ಕಾರಿ ನೌಕರರಾಗಿದ್ದು ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ, 1966ರ ನಿಯಮ 3(1)ರ ಅಡಿಯಲ್ಲಿ ದುರ್ನಡತೆ/ ದುರ್ವರ್ತನೆ ಕಂಡು ಬರುವುದರಿಂದ, ಸದರಿಯವರ ವಿರುದ್ಧ ಇಲಾಖಾ ಶಿಸ್ತು ಕ್ರಮ ಕೈಗೊಳ್ಳಲು ಕರ್ನಾಟಕ ಲೋಕಾಯುಕ್ತ ಕಾಯಿದೆ ಕಲಂ 12(3)ರ ಅಡಿ ಪ್ರದತ್ತವಾದ ಅಧಿಕಾರದಡಿ, ಈಗ, ಈ ವರದಿ ಮೂಲಕ, ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗುತ್ತಿದೆ, ಹಾಗೂ ಎದುರುದಾರರು 2005ನೇ ಸಾಲಿನಲ್ಲಿ ಸದರಿ ಪಂಚಾಯತ್‌ಗೆ ಸದಸ್ಯರಾಗಿ ಆಯ್ಕೆಯಾಗಿದ್ದು, ಸದರಿಯವರ ಅಧಿಕಾರಾವಧಿ ಮುಕ್ತಾಯಗೊಂಡಿರುವುದರಿಂದ, ಸದರಿ ಹಣ ಮತ್ತು ಅಧಿಕಾರ ದುರುಪಯೋಗಕ್ಕೆ ಸಂಬಂಧಪಟ್ಟಂತೆ ಎದುರುದಾರರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಕಾಯಿದೆ ಅನ್ವಯ ಕ್ರಿಮಿನಲ್ ಪ್ರಕರಣ ದಾಖಲಿಸಲು, ಸದಸ್ಯತ್ವ ರದ್ದುಪಡಿಸಲು ಮತ್ತು ದುರುಪಯೋಗವಾದ ಹಣ ₹36,768/-ನ್ನು ವಸೂಲಿ ಮಾಡಲು ಕೋರಿದೆ.

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ **ಮೂರು ತಿಂಗಳೊಳಗೆ** ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

Sd/- 3/11/17.

(ನ್ಯಾಯಾಮೂರ್ತಿ ಸುಬಾಷ್ ಬಿ ಅಡಿ)
ಉಪಲೋಕಾಯುಕ್ತ-2,
ಕರ್ನಾಟಕ ರಾಜ್ಯ.